ಕರ್ನಾಟಕ ಸರ್ಕಾರ (ಸಿ.ಆರ್.ಪಿ. 67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ. ಸಂಖ್ಯೆ 57)<br>ನಮೂನೆ ಸಂಖ್ಯೆ 4<br>(ಸಿವಿಲ್) |

ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ. ಹಳಿಯಾಳ
ಇವರ ನ್ಯಾಯಾಲಯದಲ್ಲಿ.

ಸಿ.ಸಿ. ನಂ.ಃ 825/2022

........................................................................

CW 05
PW 05

| | | |
|---|---|---|
| ಹೆಸರು | ಃ | ಗಂಗಾರಾಮ ಲೊಂಡಿ |
| ತಂದೆಯ ಹೆಸರು | ಃ | ಬಾಬು |
| ವಯಸ್ಸು | ಃ | 45 ವರ್ಷ |
| ಉದ್ಯೋಗ | ಃ | ಕೃಷಿ |
| ವಾಸಸ್ಥಳ | ಃ | ಬಿ.ಕೆ.ಹಳ್ಳಿ |

ದಿನಾಂಕ 29-04-2026 ರಂದು ಸತ್ಯಪ್ರತಿಜ್ಞೆ ಮೇಲೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** ಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :

ಚಾಸಾ 1, 3 ರವರು ತಮ್ಮಂದಿರು, ಹಾಗೂ ಚಾಸಾ 4, 6 ಮತ್ತು 7 ರವರು ಚಿಕ್ಕಪ್ಪಂದಿರು. ಆರೋಪಿ ಪರಿಚಯದವರು.

ಆರೋಪಿ ಮತ್ತು ಚಾಸಾ 1 ರವರು ಅನ್ಯೋನ್ಯವಾಗಿ ಇದ್ದಾರೆ, ಅವರ ನಡುವೆ ಜಗಳ ಆಗಿಲ್ಲ, ತಕರಾರು ಮಾಡಿಲ್ಲ, ಆರೋಪಿ ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಬೆದರಿಕೆ ಹಾಕಿಲ್ಲ, ಹೊಡೆದಿಲ್ಲ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ನ್ಯಾಯಾಲಯದ ಮುಂದಿರುವ ಕಲ್ಲನ್ನು ಈ ಮೊದಲು ನೋಡಿಲ್ಲ.

(ಈ ಹಂತದಲ್ಲಿ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಸಾಕ್ಷ್ಯ ಹಾಗೂ ಪ್ರಕರಣದ ಇತರ ಅಂಶಗಳನ್ನು ಗಮನಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು ).

**ಪಾಟೀ ಸವಾಲು : ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.**

ದಿನಾಂಕ 10-05-2022 ರಂದು ಪೊಲೀಸರಿಗೆ ಹೇಳಿಕೆ ನೀಡಿ ಅದರಲ್ಲಿ ದಿನಾಂಕ 09-05-2022 ರಂದು ನಾನು ನನ್ನ ಹೊಲದಲ್ಲಿ -------------- ಜಾಗದಲ್ಲಿಯೇ ಬೀಸಾಡಿ ಹೋಗಿದ್ದನು ಎಂದು ನುಡಿದಿರುತ್ತೀರಿ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಮೇರೆಗೆ ಅವರ ಹೇಳಿಕೆಯನ್ನು **ನಿಪಿ 5 ಎಂದು** ಗುರುತಿಸಲಾಯಿತು. ಆರೋಪಿತ ನಿಮ್ಮ ಊರಿನವರು ಆಗಿದ್ದರಿಂದ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ. ಹಳಿಯಾಳ